# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST

ಇದು ಸುದ್ದಿ ವಿಳಾಸ

ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 225 | Pages. 2 | Date: 17-08-2026, MONDAY | RNI NO: KARKAN/2024/89601 | Kannada Daily

ಸಂಪುಟ : 02 - ಸಂಚಿಕೆ : 225 - ಪುಟಗಳು : 2 | 17-08-2026 | ಸೋಮವಾರ | Ph: 8762954248 | ದರ : ₹1


# ಶಿಕ್ಷಕರಿಗೆ ಇತರೆ ಕೆಲಸದಿಂದ ಮುಕ್ತಿ

## ಬೋಧನೇತರ ಕಾರ್ಯಗಳಿಗೆ ನಿಯೋಜನೆಗೆ ಕಾನೂನು ಕಡಿವಾಣ; ಮೃತ ಶಿಕ್ಷಕರ ಕುಟುಂಬಕ್ಕೆ 1 ಕೋಟಿ ಪರಿಹಾರ ಪ್ರಸ್ತಾವ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಸರ್ಕಾರಿ ಶಾಲೆಗಳ ಶಿಕ್ಷಕರನ್ನು ಶಿಕ್ಷಕರನ್ನು ಶಿಕ್ಷಣೇತರ ಕಾರ್ಯಗಳಿಗೆ ನಿಯೋಜಿಸುವುದಕ್ಕೆ ಕಡಿವಾಣ ಹಾಕುವ ಉದ್ದೇಶದಿಂದ ಐತಿಹಾಸಿಕ ಕಾನೂನು ರೂಪಿಸಲು ಸಿದ್ಧತೆ ನಡೆಸಲಾಗುತ್ತಿದೆ. ಈ ಕುರಿತು ಮುಂದಿನ ವಿಧಾನಮಂಡಲ ಅಧಿವೇಶನದಲ್ಲಿ ಮಸೂದೆ ಮಂಡಿಸಲು ಪ್ರಯತ್ನಿಸಲಾಗುವುದು ಎಂದು ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ರಾಜ್ಯಾಧ್ಯಕ್ಷ ಚಂದ್ರಶೇಖರ ನುಗ್ಗಿ ಅವರು ತಿಳಿಸಿದರು.




ನಗರದ ಹಾಸನಾಂಬ ಕಲಾಕ್ಷೇತ್ರದಲ್ಲಿ ಭಾನುವಾರ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾ ಘಟಕದ ವತಿಯಿಂದ ಆಯೋಜಿಸಿದ್ದ ಅಭಿನಂದನಾ ಸಮಾರಂಭ ಹಾಗು ನಿವೃತ್ತ ಶಿಕ್ಷಕರ ಬೀಳ್ಕೊಡುಗೆ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪ್ರದಾನ ಮಾಡಿ ಅವರು ಮಾತನಾಡಿದ ಅವರು, ಶಿಕ್ಷಕರ ಮೂಲ ಕರ್ತವ್ಯ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡುವುದು. ಆದರೆ, ಕಳೆದ ಕೆಲವು ತಿಂಗಳಿಂದ ರಾಜ್ಯದ ಶಿಕ್ಷಕರನ್ನು ಎಸ್‌ಐಆರ್ ಸೇರಿ ಹಲವು ಸರ್ಕಾರಿ ಕಾರ್ಯಗಳಿಗೆ ನಿಯೋಜಿಸಲಾಗುತ್ತಿದೆ. ಇದರಿಂದ ಪಠ್ಯಕ್ರಮ ಪೂರ್ಣಗೊಳಿಸುವುದರ ಜೊತೆಗೆ ಮಕ್ಕಳಿಗೆ ಅಗತ್ಯ ಸಮಯ ನೀಡಲು ಸಾಧ್ಯವಾಗುತ್ತಿಲ್ಲ. ಇದರ ಪರಿಣಾಮ ನೇರವಾಗಿ ಮಕ್ಕಳ ಶಿಕ್ಷಣದ ಮೇಲೆ ಪರಿಣಾಮ ಬೀರುತ್ತಿದೆ ಎಂದು ಹೇಳಿದರು.

ಪ್ರಾಥಮಿಕ, ಪ್ರೌಢಶಾಲೆ ಹಾಗೂ ಕಾಲೇಜು ಹಂತದ ಬೋಧನಾ ಸಿಬ್ಬಂದಿ ತಮ್ಮ ಮೂಲ ಕರ್ತವ್ಯದಲ್ಲಿ ಸಂಪೂರ್ಣವಾಗಿ ತೊಡಗಿಸಿಕೊಂಡಾಗ ಮಾತ್ರ ಶೈಕ್ಷಣಿಕ ಗುಣಮಟ್ಟ ಹೆಚ್ಚಲು ಸಾಧ್ಯ. ಹೀಗಾಗಿ ಶಿಕ್ಷಕರನ್ನು ಅನಗತ್ಯವಾಗಿ ಇತರೆ ಇಲಾಖೆಗಳ ಕಾರ್ಯಗಳಿಗೆ ಬಳಸಿಕೊಳ್ಳುವುದನ್ನು ತಪ್ಪಿಸಬೇಕು. 5 ವರ್ಷ ವಯಸ್ಸು ದಾಟಿದ ಶಿಕ್ಷಕರನ್ನು ವಿವಿಧ ಬೋಧನೇತರ ಕಾರ್ಯಗಳಿಗೆ ನಿಯೋಜಿಸದಂತೆ ಕ್ರಮ ಕೈಗೊಳ್ಳುವ ಕುರಿತು ಚಿಂತನೆ ನಡೆದಿದೆ. ವಯಸ್ಸಾದ ಶಿಕ್ಷಕರಿಗೆ ಆರೋಗ್ಯ ಸಮಸ್ಯೆ, ಕುಟುಂಬದ ಜವಾಬ್ದಾರಿ ಸೇರಿ ಹಲವು ಸಮಸ್ಯೆಗಳಿರುತ್ತವೆ. ಅಂತಹವರನ್ನು ನಿರಂತರವಾಗಿ ಸರ್ಕಾರಿ ಕಾರ್ಯಗಳಿಗೆ ನಿಯೋಜಿಸುವುದರಿಂದ ಒತ್ತಡ ಹೆಚ್ಚಾಗುತ್ತದೆ. ಹೀಗಾಗಿ ವಯೋಮಿತಿಯನ್ನು ಪರಿಗಣಿಸಿ ವಿನಾಯಿತಿ ನೀಡುವ ವ್ಯವಸ್ಥೆ ರೂಪಿಸಬೇಕಿದೆ ಎಂದರು.

ಅನ್ಯ ಇಲಾಖೆಯ ಕರ್ತವ್ಯ ನಿರ್ವಹಿಸುವ ಸಂದರ್ಭದಲ್ಲಿ ಶಿಕ್ಷಕರು ಮೃತಪಟ್ಟರೆ ಅವರ ಕುಟುಂಬಕ್ಕೆ 1 ಕೋಟಿ ಪರಿಹಾರ ನೀಡುವ ಐತಿಹಾಸಿಕ ಮಸೂದೆಯನ್ನು ಮುಂದಿನ ವಿಧಾನಮಂಡಲ ಅಧಿವೇಶನದಲ್ಲಿ ಮಂಡಿಸುವ ನಿಟ್ಟಿನಲ್ಲಿ ಸಿದ್ಧತೆ ನಡೆದಿದೆ. ಮಸೂದೆಗೆ ಅನುಮೋದನೆ ದೊರೆತರೆ ಶಿಕ್ಷಕರಿಗೆ ಸರ್ಕಾರದ ವತಿಯಿಂದ ಹೆಚ್ಚಿನ ಭದ್ರತೆ ದೊರೆಯಲಿದೆ ಎಂದು ಹೇಳಿದರು.

**ಪ್ರತಿ ಶಾಲೆಗೆ ಮೂವರು ಸಿಬ್ಬಂದಿ:**

ಸರ್ಕಾರಿ ಶಾಲೆಗಳ ಶಿಕ್ಷಕರ ಮೇಲಿನ ಒತ್ತಡ ಕಡಿಮೆ ಮಾಡುವ ಉದ್ದೇಶದಿಂದ ಪ್ರತಿ ಶಾಲೆಗೆ ಮೂವರು ಗುತ್ತಿಗೆ ಆಧಾರಿತ ಸಿಬ್ಬಂದಿ ಒದಗಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗುತ್ತಿದೆ. ಈ ಸಂಬಂಧ ಕೇಂದ್ರ ಸರ್ಕಾರದೊಂದಿಗೆ ಕೆಲಮಟ್ಟಿನ ಹೊಂದಾಣಿಕೆಯೂ ನಡೆದಿದೆ. ಗ್ರಾಮೀಣ ಪ್ರದೇಶದ ಸರ್ಕಾರಿ ಶಾಲೆಗಳಲ್ಲಿ ಓದುವ ಮಕ್ಕಳು ಇಂಜಿನೀಯರಿಂಗ್, ವೈದ್ಯಕೀಯ ಸೇರಿದಂತೆ ವಿವಿಧ ವೃತ್ತಿಪರ ಕೋರ್ಸ್‌ಗಳಿಗೆ ಪ್ರವೇಶ ಪಡೆಯಲು ಅಗತ್ಯ ಅವಕಾಶಗಳನ್ನು ಕಲ್ಪಿಸಬೇಕು. ಆರ್ಥಿಕವಾಗಿ ಹಿಂದುಳಿದ ಹಾಗೂ ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಮುಂದಿನ ಹಂತದ ಶಿಕ್ಷಣಕ್ಕೆ ನೆರವು ದೊರೆಯುವಂತೆ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದರು.

ರಾಜ್ಯ ಪ್ರಧಾನ ಕಾರ್ಯದರ್ಶಿ ಎಚ್.ಎಸ್. ಚೇತನ್, ಜಿಲ್ಲಾ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಎಂ.ಎಸ್. ಕೃಷ್ಣಮೂರ್ತಿ, ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಬಿ.ಪಿ. ಕೃಷ್ಣಗೌಡ, ರಾಜ್ಯ ಸಂಘಟನಾ ಕಾರ್ಯದರ್ಶಿ ಸುಂದರೇಶ್, ವಿವಿಧ ಶಿಕ್ಷಕರ ಸಂಘಟನೆಗಳ ಪದಾಧಿಕಾರಿಗಳು, ಕ್ಷೇತ್ರ ಶಿಕ್ಷಣಾಧಿಕಾರಿ ರಂಗನಾಥ್ ಉಪಸ್ಥಿತರಿದ್ದರು.

### ಶಿಕ್ಷಕರ ಮೇಲಿನ ಒತ್ತಡ ಕಡಿಮೆಯಾಗಲಿ

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಶಾಸಕ ಹೆಚ್.ಪಿ. ಸ್ವರೂಪ್ ಅವರು ಸರ್ಕಾರ ಜಾತಿ ಜನಗಣತಿ, ಎಸ್‌ಐಆರ್ ಸೇರಿ ವಿವಿಧ ಕಾರ್ಯಗಳನ್ನು ಕೈಗೊಂಡಾಗ ಅದರ ಅನುಷ್ಠಾನಕ್ಕೆ ಶಿಕ್ಷಕರನ್ನೇ ಹೆಚ್ಚಾಗಿ ಬಳಸಿಕೊಳ್ಳಲಾಗುತ್ತಿದೆ. ಶಿಕ್ಷಕರಿಗೆ ಕುಟುಂಬದ ಸಮಸ್ಯೆಗಳು, ಆರೋಗ್ಯ ಸಮಸ್ಯೆಗಳು ಹಾಗೂ ಇತರ ಜವಾಬ್ದಾರಿಗಳಿದ್ದರೂ ಸರ್ಕಾರಿ ಆದೇಶದ ಮೇರೆಗೆ ಕಡ್ಡಾಯವಾಗಿ ಕಾರ್ಯನಿರ್ವಹಿಸಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ ಎಂದರು.

> ಶಿಕ್ಷಕರು ಕೇವಲ ಪಾಠ ಬೋಧಿಸುವವರಲ್ಲ, ಮುಂದಿನ ಪೀಳಿಗೆಯ ಭವಿಷ್ಯವನ್ನು ರೂಪಿಸುವ ಶಿಲ್ಪಿಗಳು. ಸಮಾಜದ ಪ್ರಗತಿಯಲ್ಲಿ ಶಿಕ್ಷಕರ ಪಾತ್ರ ಅತ್ಯಂತ ಮಹತ್ವದ್ದು.
>
> ಶಿಕ್ಷಕರ ಗೌರವ ಮತ್ತು ಹಕ್ಕುಗಳ ರಕ್ಷಣೆಗೆ ಸದಾ ನಮ್ಮ ಬೆಂಬಲವಿರುತ್ತದೆ. ಶಿಕ್ಷಣ ಕ್ಷೇತ್ರದ ಬಲವರ್ಧನೆಯೇ ಉತ್ತಮ ಸಮಾಜ ನಿರ್ಮಾಣದ ಬುನಾದಿ.
>
> **– ಶ್ರೇಯಸ್ ಪಟೇಲ್, ಸಂಸದ**

# 'ಸೇನೆಗೆ ಸೇರಿ ದೇಶಸೇವೆ ಮಾಡಿ': ನಿವೃತ್ತ ಸುಬೇದಾರ್ ಸೋಮಶೇಖರ್ ಕರೆ

## ಸ್ಕಾಲರ್ಸ್ ಶಾಲೆಯಲ್ಲಿ ಸಡಗರದ 80ನೇ ಸ್ವಾತಂತ್ರ್ಯ ದಿನಾಚರಣೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಸ್ಥಳೀಯ ಸ್ಕಾಲರ್ಸ್ ಶಾಲೆಯಲ್ಲಿ ಶನಿವಾರದಂದು 80ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಅತ್ಯಂತ ಸಡಗರ ಹಾಗೂ ಅರ್ಥಪೂರ್ಣವಾಗಿ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ರಾಷ್ಟ್ರಧ್ವಜಾರೋಹಣ ನೆರವೇರಿಸಿ ಮಾತನಾಡಿದ ಭಾರತೀಯ ಸೇನೆಯ ಹೆಮ್ಮೆಯ ಸುಪುತ್ರ, ಹಾಗೂ ನಿವೃತ್ತ ಸುಬೇದಾರ್ ಸೋಮಶೇಖರ್ ಅವರು, ತಮ್ಮ ಬಾಲ್ಯದ ಸ್ವಾತಂತ್ರ್ಯ ದಿನಾಚರಣೆಯ ಸವಿನೆನಪುಗಳನ್ನು ಮೆಲುಕು ಹಾಕಿದರು. "ದೇಶ ಸೇವೆಯೇ ಈಶ ಸೇವೆ. ಯುವಜನತೆ ಸೇನೆಗೆ ಸೇರುವ ಮೂಲಕ ಈ ಭವ್ಯ ದೇಶಕ್ಕೆ ಸೇವೆ ಸಲ್ಲಿಸಲು ಮುಂದಾಗಬೇಕು. ಇಂದಿನ ವಿದ್ಯಾರ್ಥಿಗಳು ಸ್ವಾತಂತ್ರ್ಯದ ನೈಜ ಮೌಲ್ಯ ಹಾಗೂ ಅದರ ಹಿಂದಿನ ತ್ಯಾಗವನ್ನು ಅರಿಯಬೇಕು" ಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಶಾಲೆಯ ಆಡಳಿತಾಧಿಕಾರಿ ಡಾ. ಎಚ್.ಎನ್. ಚಂದ್ರಶೇಖರ್ ಅವರು ಮಾತನಾಡಿ, 80ನೇ ಸ್ವಾತಂತ್ರ್ಯ ದಿನಾಚರಣೆಯ ಶುಭಾಶಯಗಳನ್ನು ಕೋರಿದರು. ಜೊತೆಗೆ, ಮಕ್ಕಳು ಈ ಐತಿಹಾಸಿಕ ದಿನದ ಮಹತ್ವವನ್ನು ಅರಿತು ಉತ್ತಮ ಪ್ರಜೆಗಳಾಗಿ ರೂಪುಗೊಳ್ಳಬೇಕು ಎಂದು ಕಿವಿಮಾತು ಹೇಳಿದರು.

ಇದೇ ಸಂದರ್ಭದಲ್ಲಿ ಶಾಲೆಯ ವಿದ್ಯಾರ್ಥಿಗಳು ಪ್ರಸ್ತುತಪಡಿಸಿದ ದೇಶಭಕ್ತಿ ಗೀತೆಗಳ ಗಾಯನ ಹಾಗೂ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಎಲ್ಲರಲ್ಲೂ ದೇಶಪ್ರೇಮದ ಕಿಚ್ಚು ಹೊತ್ತಿಸಿದವು. ವಿಶೇಷವಾಗಿ,



ಪುಟಾಣಿ ವಿದ್ಯಾರ್ಥಿಗಳು ಸ್ವಾತಂತ್ರ್ಯಕ್ಕಾಗಿ ಪ್ರಾಣತೆತ್ತ ಮಹನೀಯರ ವೇಷಭೂಷಣಗಳನ್ನು ಧರಿಸಿ ಹೆಜ್ಜೆಹಾಕಿದ್ದು ನೋಡುಗರ ಗಮನ ಸೆಳೆಯುವ ಜೊತೆಗೆ ಪೋಷಕರ ಮೆಚ್ಚುಗೆಗೆ ಪಾತ್ರವಾಯಿತು.

ಕಾರ್ಯಕ್ರಮದಲ್ಲಿ ಶಾಲೆಯ ಸಂಸ್ಥಾಪಕರಾದ ಲಕ್ಷ್ಮಿ ನಾಗರಾಜು, ಕಾರ್ಯದರ್ಶಿ ಮಮತಾ ಚಂದ್ರಶೇಖರ್, ಮುಖ್ಯೋಪಾಧ್ಯಾಯಿನಿ ಸಂಧ್ಯಾ ಹಾಗೂ ಶಾಲೆಯ ಎಲ್ಲಾ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಶ್ರೀ ಬುತ್ತಿ ಸೋಮೇಶ್ವರ ದೇವಾಲಯ ಲೋಕಾರ್ಪಣೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ : ತಾಲ್ಲೂಕಿನ ಹೊಸಹಳ್ಳಿ ಪುರ ಗ್ರಾಮದಲ್ಲಿ ಜೀರ್ಣೋದ್ಧಾರಗೊಂಡಿರುವ ಶ್ರೀ ಬುತ್ತಿ ಸೋಮೇಶ್ವರ ದೇವಾಲಯ ಲೋಕಾರ್ಪಣ ಕಾರ್ಯವನ್ನು ನೊಣವಿನಕೆರೆ ಶ್ರೀ ಕರಿವೃಷಭ ದೇಶಿಕೇಂದ್ರ ಶಿವಯೋಗೀಶ್ವರ ಮಹಾ ಸ್ವಾಮೀಜಿ ಅವರು ಭಾನುವಾರ ನೆರವೇರಿಸಿದರು.

ಹಿನ್ನಲೆಯಲ್ಲಿ ಕಳೆದ ಮೂರು ದಿನಗಳಿಂದ ದೇಗುಲದಲ್ಲಿ ವಿಶೇಷ ಪೂಜಾ ಕೈಂಕರ್ಯಗಳು ನೆರವೇರಿದವು.

ಹಸಿರು ಚಪ್ಪರ ಹಾಕಿ ತಳಿರು-ತೋರಣಗಳಿಂದ ಸಿಂಗರಿಸಿದ್ದು ದೇಗುಲ, ರಸ್ತೆ ಹಾಗೂ ಬೀದಿಗಳನ್ನು ವಿದ್ಯುತ್ ದೀಪಾಲಂಕಾರಗೊಳಿಸಲಾಗಿತ್ತು.

ಭಾನುವಾರ ಮುಂಜಾನೆ ಗ್ರಾಮಕ್ಕೆ ಆಗಮಿಸಿದ ನೊಣವಿನಕೆರೆ ಶ್ರೀ ಕಾಡುಸಿದ್ದೇಶ್ವರ ಮಠದ ಶ್ರೀ ಕರಿವೃಷಭ ದೇಶಿಕೇಂದ್ರ ಶಿವಯೋಗಿಸ್ವರ ಸ್ವಾಮೀಜಿಯವರನ್ನು ಪಾದಪೂಜೆ ಮಾಡಿ ಪೂರ್ಣಕುಂಭದೊಂದಿಗೆ ಸ್ವಾಗತಿಸಲಾಯಿತು.

ಶ್ರೀಗಳ ದಿವ್ಯ ಸಾನಿಧ್ಯದಲ್ಲಿ ಶ್ರೀ ಬುತ್ತಿ ಸೋಮೇಶ್ವರ ಸ್ವಾಮಿಗೆ ವಿವಿಧ ಬಗೆಯ ಅಭಿಷೇಕಗಳು ನೆರವೇರಿದ್ದು ವಸ್ತ್ರ ಹಾಗೂ ಆಭರಣಗಳಿಂದ ಸಿಂಗರಿಸಲಾಯಿತು. ಶ್ರೀಗಳು ಕಳಶ ಪ್ರತಿಷ್ಠಾಪನ ಕಾರ್ಯವನ್ನು ನೆರವೇರಿಸಿ ಭಕ್ತರಿಗೆ ಆಶೀರ್ವಚನ ನೀಡಿದರು. ಭಕ್ತರು ಶ್ರೀಗಳು ಹಾಗೂ ಸ್ವಾಮಿಯ ದರ್ಶನ ಪಡೆದು ಪುನೀತರಾದರು.

ಹೋಮ, ಹವನ ಹಾಗೂ ಪೂರ್ಣಾವತಿ ನಂತರ ಮಹಾ ಮಂಗಳಾರತಿ ನಡೆಯಿತು. ಬಳಿಕ ಅನ್ನದಾಸೋಹ ನೆರವೇರಿತು.

ನರಿಹಳ್ಳಿ, ಉಳ್ಳಾವಳ್ಳಿ, ಹೊಸಹಳ್ಳಿ, ತುಪ್ಪದಹಳ್ಳಿ, ನಾಗನಹಳ್ಳಿ, ಬಿಳಿಕೆರೆ ಸೇರಿದಂತೆ ಸುತ್ತಮುತ್ತಲ ಗ್ರಾಮಸ್ಥರು ದೇಗುಲದ ಲೋಕಾರ್ಪಣ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

# ಕೃಷ್ಣಚಾರಿ ಅವರ ಏಕವ್ಯಕ್ತಿ ಚಿತ್ರಕಲಾ ಪ್ರದರ್ಶನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಪ್ರಕೃತಿ, ಪರಿಸರ ಹಾಗು ಮಾನವನ ನಡುವಿನ ಅವಿನಾಭಾವ ಸಂಬಂಧವನ್ನು ವಿಭಿನ್ನ ಕಲಾತ್ಮಕ ದೃಷ್ಟಿಕೋನದಲ್ಲಿ ಕಟ್ಟಿಕೊಡುವ ಮೂಲಕ ಯುವ ಚಿತ್ರಕಲಾವಿದ ಕೃಷ್ಣಚಾರಿ ಅವರು ತಮ್ಮದೇ ಆದ ಕಲಾ ಭಾಷೆಯನ್ನು ರೂಪಿಸಿಕೊಂಡಿದ್ದಾರೆ ಎಂದು ನಿರ್ಮಲಾ ಕಲಾ ಶಾಲೆಯ ನಿವೃತ್ತ ಪ್ರಾಂಶುಪಾಲ ಆರ್.ಸಿ.ಕಾರದಕಟ್ಟಿ ಹೇಳಿದರು.

ನಗರದ ಹಾಸನಾಂಬ ಕಲಾಕ್ಷೇತ್ರದಲ್ಲಿ ಭಾನುವಾರ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಕಾರದೊಂದಿಗೆ ಆಯೋಜಿಸಿದ್ದ ಕೃಷ್ಣಚಾರಿ ಅವರ ಏಕವ್ಯಕ್ತಿ ಚಿತ್ರಕಲಾ ಪ್ರದರ್ಶನ ಉದ್ಘಾಟಿಸಿ ಮಾತನಾಡಿದ ಅವರು, ಕೃಷ್ಣಚಾರಿ ಅವರ ಕಲಾಕೃತಿಗಳು ಕೇವಲ ಕಣ್ಣಿಗೆ ಕಾಣುವ ದೃಶ್ಯಗಳನ್ನು ಚಿತ್ರಿಸುವುದಕ್ಕೆ ಸೀಮಿತವಾಗಿಲ್ಲ. ಅವುಗಳ ಹಿಂದೆ ಪರಿಸರದ ಕಾಳಜಿ, ಪ್ರಕೃತಿಯ ಸೂಕ್ಷ್ಮತೆಯನ್ನು ಗ್ರಹಿಸುವ ಮನಸ್ಸು ಹಾಗು ಮನುಷ್ಯಪ್ರಕೃತಿಯ ನಡುವಿನ ಸಂಬಂಧವನ್ನು ಪ್ರಶ್ನಿಸುವ ಚಿಂತನೆಯಿದೆ. ಇದೇ ಅವರ ಕಲಾ ಪ್ರಯೋಗದ ವಿಶೇಷತೆ ಎಂದರು.

ಸಾಂಪ್ರದಾಯಿಕ ಮಾಧ್ಯಮಗಳ ಜೊತೆಗೆ ನೈಸರ್ಗಿಕ ವಸ್ತುಗಳು ಸೇರಿ ವಿವಿಧ ವಸ್ತುಗಳನ್ನು ಸೃಜನಾತ್ಮಕವಾಗಿ ಬಳಸಿಕೊಂಡು ಕಲ್ಪನೆಗಳಿಗೆ ರೂಪ ನೀಡಿರುವ ಕೃಷ್ಣಚಾರಿ, ಒಂದೇ ತಂತ್ರಕ್ಕೆ ಸೀಮಿತವಾಗದೆ ವಿವಿಧ ಮಾಧ್ಯಮಗಳೊಂದಿಗೆ ಪ್ರಯೋಗ ನಡೆಸಿದ್ದಾರೆ. ಇದರಿಂದ ಅವರ ಕಲಾಕೃತಿಗಳಿಗೆ ವೈವಿಧ್ಯತೆ ದೊರೆತಿದೆ ಎಂದು ಹೇಳಿದರು.



ಪ್ರದರ್ಶನದಲ್ಲಿ ವಿವಿಧ ಹಂತಗಳಲ್ಲಿ ರಚಿಸಿರುವ ಕಲಾಕೃತಿಗಳನ್ನು ಪ್ರದರ್ಶಿಸಲಾಗಿದ್ದು, ಪ್ರತಿಯೊಂದು ಕೃತಿಯೂ ನೋಡುಗರಲ್ಲಿ ವಿಭಿನ್ನ ಭಾವನೆ ಹಾಗೂ ಚಿಂತನೆಯನ್ನು ಮೂಡಿಸುವ ಸಾಮರ್ಥ್ಯ ಹೊಂದಿದೆ. ಪ್ರಶಸ್ತಿ ಪಡೆದ ಕಲಾಕೃತಿಗಳೂ ಪ್ರದರ್ಶನದಲ್ಲಿರುವುದು ವಿಶೇಷ ಎಂದರು.

ಚಿತ್ರಕಲಾವಿದ ಬಿ.ಎಸ್.ದೇಸಾಯಿ ಅವರು ಮಾತನಾಡಿ, ಕೃಷ್ಣಚಾರಿ ಅವರ ಏಕವ್ಯಕ್ತಿ ಚಿತ್ರಕಲಾ ಪ್ರದರ್ಶನ ಹಲವು ಕಾರಣಗಳಿಂದ ವಿಶಿಷ್ಟವಾಗಿದೆ. ಕಲೆಯ ಸ್ವಾದ ಅನುಭವಿಸುವುದರ ಜತೆಗೆ ಪ್ರತಿಯೊಂದು ಕಲಾಕೃತಿಯೂ ನೋಡುಗರನ್ನು ತಮ್ಮದೇ ರೀತಿಯಲ್ಲಿ ಚಿಂತಿಸುವಂತೆ ಮಾಡುತ್ತದೆ. ಒಂದು ಚಿತ್ರವನ್ನು ನೂರು ಮಂದಿ ನೋಡಿದರೂ ಪ್ರತಿಯೊಬ್ಬರಿಗೂ ವಿಭಿನ್ನ ಅನುಭವವಾಗಬಹುದು. ಅವರ ವೈಯಕ್ತಿಕ ಅನುಭವ, ಚಿಂತನೆ ಹಾಗೂ ದೃಷ್ಟಿಕೋನದ ಆಧಾರದ ಮೇಲೆ ಕಲಾಕೃತಿಯ ಅರ್ಥ ಬದಲಾಗುತ್ತದೆ. ಇದೇ ಕಲೆಯ ಶಕ್ತಿ ಎಂದು ಹೇಳಿದರು.

**ಚಿತ್ರಕಲೆಯ ಪ್ರಾತ್ಯಕ್ಷಿಕೆ:**

ಇದೇ ಸಂದರ್ಭದಲ್ಲಿ ಬಿ.ಎಸ್. ದೇಸಾಯಿ ಅವರು ಚಿತ್ರಕಲೆಯ ಪ್ರಾತ್ಯಕ್ಷಿಕೆ ನಡೆಸಿ, ಕಲಾಕೃತಿ ರೂಪುಗೊಳ್ಳುವ ವಿವಿಧ ಹಂತಗಳನ್ನು ಕಲಾಭಿಮಾನಿಗಳಿಗೆ ಪರಿಚಯಿಸಿದರು. ಕಲೆಯನ್ನು ಕೇವಲ ವೀಕ್ಷಿಸುವುದಷ್ಟೇ ಅಲ್ಲದೆ, ಅದರ ಸೃಜನಾತ್ಮಕ ಪ್ರಕ್ರಿಯೆಯನ್ನು ಅರ್ಥಮಾಡಿಕೊಳ್ಳುವ ಅವಕಾಶವೂ ಪ್ರಾತ್ಯಕ್ಷಿಕೆಯ ಮೂಲಕ ದೊರೆಯಿತು.

ಕೃಷ್ಣಚಾರಿ ಅವರ ಪ್ರದರ್ಶನದಲ್ಲಿ ಪರಿಸರ, ಪ್ರಕೃತಿ, ಮಣ್ಣು, ಜೀವವೈವಿಧ್ಯತೆ ಹಾಗೂ ಮಾನವಪ್ರಕೃತಿ ಸಂಬಂಧವನ್ನು ವಿವಿಧ ಆಯಾಮಗಳಲ್ಲಿ ಅಭಿವ್ಯಕ್ತಿಪಡಿಸಿರುವ ಕಲಾಕೃತಿಗಳು ಪ್ರದರ್ಶನಕ್ಕಿಡಲಾಗಿದ್ದು, ಕಲಾಭಿಮಾನಿಗಳು ಹಾಗು ಸಾರ್ವಜನಿಕರ ಗಮನ ಸೆಳೆದವು.

ಎಸ್.ಆರ್.ಎಸ್. ಪ್ರಜ್ಞಾವಿದ್ಯಾ ಶಾಲೆಯ ಕಾರ್ಯದರ್ಶಿ ಎಂ. ನಟರಾಜು, ಕರ್ನಾಟಕ ಲಲಿತಕಲಾ ಅಕಾಡೆಮಿ ಸದಸ್ಯ ಹೆಚ್.ಎಸ್. ಮಂಜುನಾಥ್, ಡಿವೈಎಸ್‌ಪಿ ಬಾಲರಾಜು, ಹಿರಿಯ ವ್ಯಂಗ್ಯಚಿತ್ರಕಾರ ಎಂ.ವಿ. ಶಿವರಾಮ್ ಉಪಸ್ಥಿತರಿದ್ದರು.

# ಕಾಡಾನೆಗಳ ಚಲನವಲನ: ಸಾರ್ವಜನಿಕರಿಗೆ ಅರಣ್ಯ ಇಲಾಖೆ ಎಚ್ಚರಿಕೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಸಕಲೇಶಪುರ ವಲಯ ವ್ಯಾಪ್ತಿಯಲ್ಲಿ ಕಾಡಾನೆಗಳ ಚಲನವಲನ ಮುಂದುವರಿದಿರುವ ಹಿನ್ನೆಲೆಯಲ್ಲಿ ಅರಣ್ಯ ಇಲಾಖೆ ಅಧಿಕಾರಿಗಳು ಸಾರ್ವಜನಿಕರು ಹಾಗೂ ಕಾಫಿ ತೋಟದ ಕಾರ್ಮಿಕರಿಗೆ ಎಚ್ಚರಿಕೆ ನೀಡಿದರು.

ಸಕಲೇಶಪುರ ವಲಯ ಅರಣ್ಯಾಧಿಕಾರಿಗಳು ಕಾಡಾನೆಗಳು ಪ್ರಸ್ತುತ ಸಂಚರಿಸುತ್ತಿರುವ ಕಬ್ಬಿನಗದ್ದೆ?ಈಚಲವಳ್ಳಿ ಗ್ರಾಮದ ಸುದೇವ್ ಅವರ ತೋಟಕ್ಕೆ ಭೇಟಿ ನೀಡಿ, ಸ್ಥಳ ಪರಿಶೀಲನೆ ನಡೆಸಿದರು. ಬಳಿಕ ಕಬ್ಬಿನಗದ್ದೆ ಗ್ರಾಮದ ನಿವಾಸಿಗಳು, ಸಾರ್ವಜನಿಕರು ಹಾಗೂ ಕಾಫಿ ತೋಟದ ಕಾರ್ಮಿಕರಿಗೆ ಕಾಡಾನೆಗಳ ಚಲನವಲನದ ಕುರಿತು ಮಾಹಿತಿ ನೀಡಿದರು.




ಕಾಡಾನೆಗಳು ತೋಟಗಳ ವ್ಯಾಪ್ತಿಯಲ್ಲಿ ಸಂಚರಿಸುತ್ತಿರುವ ಹಿನ್ನೆಲೆಯಲ್ಲಿ ಸಾರ್ವಜನಿಕರು ಹೆಚ್ಚಿನ ಮುನ್ನೆಚ್ಚರಿಕೆ ವಹಿಸುವಂತೆ ಅಧಿಕಾರಿಗಳು ಸೂಚಿಸಿದರು. ವಿಶೇಷವಾಗಿ ಬೆಳಗಿನ ಜಾವ ಹಾಗೂ ಸಂಜೆ ವೇಳೆಯಲ್ಲಿ ತೋಟಗಳಿಗೆ ತೆರಳುವಾಗ ಎಚ್ಚರಿಕೆ ವಹಿಸಬೇಕು. ಒಬ್ಬಂಟಿಯಾಗಿ ತೋಟದೊಳಗೆ ತೆರಳದೆ, ಕಾಡಾನೆಗಳ ಇರುವಿಕೆಯ ಬಗ್ಗೆ ಮಾಹಿತಿ ಪಡೆದುಕೊಂಡು ನಂತರ ತೆರಳುವಂತೆ ತಿಳಿಸಿದರು.

ಅರಣ್ಯ ಇಲಾಖೆ ಸಿಬ್ಬಂದಿಯಿಂದ ಕಾಡಾನೆಗಳ ಚಲನವಲನದ ಕುರಿತು ಮಾಹಿತಿ ಪಡೆದುಕೊಂಡ ಬಳಿಕವೇ ಕಾಫಿ ತೋಟಗಳಿಗೆ ತೆರಳಬೇಕು. ಕಾಡಾನೆಗಳು ಕಂಡುಬಂದಲ್ಲಿ ಅವುಗಳನ್ನು ಹಿಂಬಾಲಿಸುವುದು, ಹತ್ತಿರ ಹೋಗುವುದು ಅಥವಾ ಪ್ರಚೋದಿಸುವಂತಹ ಯಾವುದೇ ಪ್ರಯತ್ನ ಮಾಡಬಾರದು. ಕಾಡಾನೆಗಳ ಚಲನವಲನ ಕಂಡುಬಂದರೆ ಕೂಡಲೇ ಅರಣ್ಯ ಇಲಾಖೆಗೆ ಮಾಹಿತಿ ನೀಡುವಂತೆ ಅಧಿಕಾರಿಗಳು ಮನವಿ ಮಾಡಿದರು.

# ವಳಲಹಳ್ಳಿ ಬೆಳೆಗಾರರ ಸಂಘದಲ್ಲಿ ಸಂಭ್ರಮದ ಸ್ವಾತಂತ್ರ್ಯೋತ್ಸವ

## ರೈತರ ಸಮಸ್ಯೆಗಳಿಗೆ ಒಗ್ಗಟ್ಟಿನ ಹೋರಾಟ ಅಗತ್ಯ: ವಿ.ಪಿ. ವಿಶ್ವನಾಥ್

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ತಾಲ್ಲೂಕಿನ ಹೆತ್ತೂರು ಹೋಬಳಿಯ ವಳಲಹಳ್ಳಿ ಗ್ರಾಮ ಪಂಚಾಯಿತಿ ಬೆಳೆಗಾರರ ಸಂಘದ ವತಿಯಿಂದ 80ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಸಂಭ್ರಮ, ಸಡಗರ ಹಾಗೂ ಅರ್ಥಪೂರ್ಣವಾಗಿ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಸಂಘದ ಅಧ್ಯಕ್ಷ ವಿ.ಪಿ. ವಿಶ್ವನಾಥ್, ಸ್ವಾತಂತ್ರ್ಯೋತ್ಸವವು ಕೇವಲ ಧ್ವಜಾರೋಹಣ, ಸಿಹಿ ಹಂಚಿಕೆ ಹಾಗೂ ಸಾಂಪ್ರದಾಯಿಕ ಕಾರ್ಯಕ್ರಮಕ್ಕೆ ಸೀಮಿತವಾಗದೆ, ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಮಹನೀಯರ ಆಶಯಗಳನ್ನು ಬದುಕಿನಲ್ಲಿ ಅಳವಡಿಸಿಕೊಳ್ಳುವ ಸಂಕಲ್ಪದ ದಿನವಾಗಬೇಕು ಎಂದರು.

ರೈತರು ಮತ್ತು ಬೆಳೆಗಾರರು ಎದುರಿಸುತ್ತಿರುವ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಂಡುಕೊಳ್ಳಲು ಸಂಘಟಿತರಾಗಿ, ಒಗ್ಗಟ್ಟಿನಿಂದ ಹೋರಾಟ ನಡೆಸಬೇಕು. ಕಾಡಾನೆ ಹಾವಳಿ, ಬೆಳೆಹಾನಿ, ವಿದ್ಯುತ್, ರಸ್ತೆ ಸೇರಿದಂತೆ ಗ್ರಾಮೀಣ ಭಾಗದ ಹಲವು ಸಮಸ್ಯೆಗಳ ಕುರಿತು ಸಂಬಂಧಿಸಿದ ಇಲಾಖೆಗಳ ಗಮನ ಸೆಳೆದು, ರೈತರ ಪರವಾಗಿ ನಿರಂತರವಾಗಿ ಧ್ವನಿ ಎತ್ತುವುದು ಸಂಘದ ಜವಾಬ್ದಾರಿಯಾಗಿದೆ. ಸ್ವಾತಂತ್ರ್ಯ ನಮಗೆ ಹಕ್ಕುಗಳನ್ನು ನೀಡಿರುವುದರ ಜತೆಗೆ ಜವಾಬ್ದಾರಿಯನ್ನೂ ನೀಡಿದ್ದು, ಸಮಾಜದ ಕಟ್ಟಕಡೆಯ ವ್ಯಕ್ತಿಯ ಬದುಕಿನಲ್ಲೂ ಅಭಿವೃದ್ಧಿಯ ಬೆಳಕು ಮೂಡಿಸುವುದು ನಮ್ಮೆಲ್ಲರ ಕರ್ತವ್ಯ ಎಂದು ಹೇಳಿದರು.

ನಿವೃತ್ತ ಮುಖ್ಯೋಪಾಧ್ಯಾಯ ಬಿ. ವೆಂಕಟರಮಣ ಮಾತನಾಡಿ, ಸ್ವಾತಂತ್ರ್ಯಕ್ಕಾಗಿ ನಮ್ಮ ಪೂರ್ವಜರು ತ್ಯಾಗ, ಹೋರಾಟ ಹಾಗೂ ಬಲಿದಾನ ಮಾಡಿದ್ದಾರೆ. ಅವರ ಹೋರಾಟದ ಫಲವಾಗಿ ಇಂದು ನಾವು ಸ್ವತಂತ್ರವಾಗಿ ಬದುಕುತ್ತಿದ್ದೇವೆ. ಆದರೆ ಗ್ರಾಮೀಣ ಪ್ರದೇಶದ ರೈತರು ಹಾಗೂ ಬೆಳೆಗಾರರು ತಮ್ಮ ಮೂಲಭೂತ ಸಮಸ್ಯೆಗಳಿಗಾಗಿ ಇಂದಿಗೂ ಹೋರಾಡಬೇಕಾದ ಪರಿಸ್ಥಿತಿ ಇದೆ ಎಂದರು.



ಈ ಭಾಗದ ಬೆಳೆಗಾರರ ಜ್ವಲಂತ ಸಮಸ್ಯೆಗಳನ್ನು ಪರಿಹರಿಸಬೇಕಾದರೆ ನಾವು ಮೌನವಾಗಿ ಕುಳಿತರೆ ಸಾಧ್ಯವಿಲ್ಲ. 'ಸೈಲೆಂಟಾಗಿ ಇದ್ದೇವೆ; ಇನ್ನು ವೈಲೆಂಟಾಗಿ ಕೆಲಸ ಮಾಡಬೇಕು' ಎಂಬ ಮನೋಭಾವದಿಂದ ಸಂಘಟಿತವಾಗಿ ಕಾರ್ಯನಿರ್ವಹಿಸಬೇಕು. ನಮ್ಮ ಸಮಸ್ಯೆಗಳನ್ನು ಸರ್ಕಾರದ ಮಟ್ಟಕ್ಕೆ ಪರಿಣಾಮಕಾರಿಯಾಗಿ ತಲುಪಿಸಿ ಪರಿಹಾರ ಕಂಡುಕೊಳ್ಳಲು ಒಗ್ಗಟ್ಟಿನ ಪ್ರಯತ್ನ ಅಗತ್ಯ. ಈ ನಿಟ್ಟಿನಲ್ಲಿ ಮಾಧ್ಯಮಗಳ ಪಾತ್ರವೂ ಮಹತ್ವದ್ದಾಗಿದ್ದು, ಗ್ರಾಮೀಣ ಭಾಗದ ರೈತರ ಧ್ವನಿಯನ್ನು ಸರ್ಕಾರದ ಮಟ್ಟಕ್ಕೆ ತಲುಪಿಸುವ ಕೆಲಸವನ್ನು ಮಾಧ್ಯಮಗಳು ಮಾಡಬೇಕು ಎಂದು ಹೇಳಿದರು.

ನಿವೃತ್ತ ಮುಖ್ಯೋಪಾಧ್ಯಾಯ ಹೆಚ್.ಎಸ್. ವೆಂಕಟೇಶ್ ಮಾತನಾಡಿ, ವಳಲಹಳ್ಳಿ ಗ್ರಾಮ ಪಂಚಾಯಿತಿ ಬೆಳೆಗಾರರ ಸಂಘವು ಸಾಮಾಜಿಕ ಕಳಕಳಿಯಿಂದ ಹಲವು ವಿಚಾರಗಳಲ್ಲಿ ಸ್ಪಂದಿಸುತ್ತಿರುವುದು ಶ್ಲಾಘನೀಯ. ಈ ಸೇವಾ ಮನೋಭಾವವನ್ನು ಮುಂದುವರಿಸಿಕೊಂಡು ಹೋಗಬೇಕು ಎಂದರು.

ಕಾಡಾನೆಗಳಿಂದ ಬೆಳೆ ಹಾನಿಯಾದ ಕೂಡಲೇ ಅಧಿಕಾರಿಗಳನ್ನು ಸ್ಥಳಕ್ಕೆ ಕರೆಸಿ, ಹಾನಿಯ ವಾಸ್ತವ ಸ್ಥಿತಿಯನ್ನು ಪರಿಶೀಲಿಸಿ ರೈತರಿಗೆ ತ್ವರಿತವಾಗಿ ಪರಿಹಾರ ದೊರೆಯುವಂತೆ ಕ್ರಮ ಕೈಗೊಳ್ಳಬೇಕು. ಕಸ್ತೂರಿರಂಗನ್ ವರದಿಯಿಂದ ಈ ಭಾಗದ ರೈತರು ಹಾಗೂ ಗ್ರಾಮೀಣ ಜನರ ಮೇಲೆ ಉಂಟಾಗಬಹುದಾದ ಪರಿಣಾಮಗಳ ಕುರಿತು ಸರ್ಕಾರದ ಗಮನ ಸೆಳೆಯಬೇಕು. ವರದಿಯನ್ನು ತಿರಸ್ಕರಿಸುವಂತೆ ಹಾಗೂ ಮರುಪರಿಶೀಲನೆ ನಡೆಸುವಂತೆ ತಾಲೂಕಿನ ಎಲ್ಲ ಗ್ರಾಮ ಪಂಚಾಯಿತಿಗಳು ಒಗ್ಗಟ್ಟಾಗಿ ಧ್ವನಿ ಎತ್ತಬೇಕು ಎಂದು ಒತ್ತಾಯಿಸಿದರು.

ನಿವೃತ್ತ ಮುಖ್ಯೋಪಾಧ್ಯಾಯ ಬಿ.ಎನ್. ಚಂದ್ರಶೇಖರ ತಮ್ಮ ಸುದೀರ್ಘ ಸೇವಾ ಅವಧಿಯ ಅನುಭವಗಳನ್ನು ಹಂಚಿಕೊಂಡರು. ಶಿಕ್ಷಣ ಕ್ಷೇತ್ರದಲ್ಲಿ ದೀರ್ಘಕಾಲ ಸೇವೆ ಸಲ್ಲಿಸಲು ಸ್ಥಳೀಯರು ನೀಡಿದ ಸಹಕಾರವನ್ನು ಸ್ಮರಿಸಿದ ಅವರು, ತಮ್ಮ ಶಿಷ್ಯರು ಇಂದು ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸುತ್ತಿರುವುದು ಹೆಮ್ಮೆಯ ಸಂಗತಿ. ಶಿಕ್ಷಣವು ವ್ಯಕ್ತಿಯ ಬದುಕನ್ನು ಮಾತ್ರವಲ್ಲದೆ ಇಡೀ ಸಮಾಜವನ್ನು ಬದಲಿಸುವ ಶಕ್ತಿಯಾಗಿದ್ದು, ಗ್ರಾಮೀಣ ಪ್ರದೇಶದ ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಪ್ರೋತ್ಸಾಹ ನೀಡಬೇಕು ಎಂದು ಹೇಳಿದರು.

### ನಿವೃತ್ತ ಶಿಕ್ಷಕರು, ಸಾಧಕ ಕೃಷಿಕರಿಗೆ ಸನ್ಮಾನ

ಸ್ವಾತಂತ್ರ್ಯೋತ್ಸವದ ಅಂಗವಾಗಿ ಹೆಚ್.ವಿ.ಹಳ್ಳಿ ಪ್ರೌಢಶಾಲೆಯಲ್ಲಿ ಸೇವೆ ಸಲ್ಲಿಸಿ ನಿವೃತ್ತರಾದ ಕೆ.ಬಿ. ಚಂದ್ರೇಗೌಡ, ಬಿ. ವೆಂಕಟರಮಣ, ಹೆಚ್.ಎಸ್. ವೆಂಕಟೇಶ್, ಬಿ.ಎನ್. ಚಂದ್ರಶೇಖರ ಹಾಗೂ ಪಿ.ಹೆಚ್. ನಾಗರಾಜು ಅವರನ್ನು ಬೆಳೆಗಾರರ ಸಂಘದ ವತಿಯಿಂದ ಗೌರವಿಸಿ ಸನ್ಮಾನಿಸಲಾಯಿತು.

ಅದೇ ರೀತಿ ಕರಡಿಗಾಲ ಗ್ರಾಮದ ಸಾಗರಿಕಾ ಶಿವಣ್ಣಗೌಡ ಅವರು ಹೈನುಗಾರಿಕೆಯಲ್ಲಿ ಗಮನಾರ್ಹ ಸಾಧನೆ ಮಾಡಿರುವ ಹಿನ್ನೆಲೆಯಲ್ಲಿ ಅವರನ್ನು ಸನ್ಮಾನಿಸಲಾಯಿತು.

ಎಚ್.ಡಿ.ಪಿ. ಮಾಜಿ ಸಂಘಟನಾ ಕಾರ್ಯದರ್ಶಿ ಕೆ.ಪಿ. ಕೃಷ್ಣೇಗೌಡ ಮಾತನಾಡಿ, ಕರಡಿಗಾಲ ಗ್ರಾಮದ ಸಾಗರಿಕಾ ಶಿವಣ್ಣಗೌಡ ಅವರು ಹೈನುಗಾರಿಕೆಯಲ್ಲಿ ಸಾಧನೆ ಮಾಡುವ ಮೂಲಕ ಮಾದರಿ ಕೃಷಿಕರಾಗಿ ಗುರುತಿಸಿಕೊಂಡಿರುವುದು ಸಂತಸದ ಸಂಗತಿ. ಕೃಷಿ ಮತ್ತು ಹೈನುಗಾರಿಕೆಯಂತಹ ಸ್ವಾವಲಂಬಿ ಚಟುವಟಿಕೆಗಳು ಗ್ರಾಮೀಣ ಆರ್ಥಿಕತೆಯ ಬೆನ್ನೆಲುಬಾಗಿವೆ. ಶಿಕ್ಷಣದ ಜತೆಗೆ ಕೃಷಿ, ಹೈನುಗಾರಿಕೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡುವ ಮೂಲಕ ಯುವಜನರು ಸಮಾಜಕ್ಕೆ ಮಾದರಿಯಾಗಬೇಕು ಎಂದು ಹೇಳಿದರು.

ವಿಶೇಷ ಚೇತನರಾಗಿದ್ದರೂ ಸಾಮಾಜಿಕ ಕಳಕಳಿಯಿಂದ ನಿರಂತರವಾಗಿ ಕಾರ್ಯನಿರ್ವಹಿಸುತ್ತಿರುವ ಹರ್ಷ ಕಲ್ಲುತೋಟ ಅವರನ್ನು ಬೆಳೆಗಾರರ ಸಂಘದ ಪದಾಧಿಕಾರಿಗಳು ಅವರ ಮನೆಗೆ ತೆರಳಿ ವಿಶೇಷವಾಗಿ ಸನ್ಮಾನಿಸಿದರು.

ರೈತರು ಮತ್ತು ಬೆಳೆಗಾರರಿಗೆ ಸರ್ಕಾರದಿಂದ ದೊರೆಯುವ ವಿವಿಧ ಸೌಲಭ್ಯಗಳು, ಯೋಜನೆಗಳು ಹಾಗೂ ಕೃಷಿಗೆ ಸಂಬಂಧಿಸಿದ ಮಾಹಿತಿಗಳನ್ನು ಸಾಮಾಜಿಕ ಜಾಲತಾಣಗಳ ಮೂಲಕ ನಿರಂತರವಾಗಿ ಹಂಚಿಕೊಳ್ಳುತ್ತಿರುವ ಹರ್ಷ, ಕಾಡಾನೆಗಳ ಚಲನವಲನದ ಕುರಿತು ಮುನ್ನೆಚ್ಚರಿಕೆ ನೀಡಲು 'ಎಲಿಫೆಂಟ್ ಅಲರ್ಟ್' ಸೇರಿದಂತೆ ವಿವಿಧ ಗುಂಪುಗಳನ್ನು ರಚಿಸಿ ಅಗತ್ಯ ಮಾಹಿತಿಯನ್ನು ಬೆಳೆಗಾರರಿಗೆ ತಲುಪಿಸುತ್ತಿದ್ದಾರೆ.

ಸನ್ಮಾನ ಸ್ವೀಕರಿಸಿ ಮಾತನಾಡಿದ ಹರ್ಷ ಕಲ್ಲುತೋಟ, ರೈತರ ಸಮಸ್ಯೆಗಳಿಗೆ ಪರಿಣಾಮಕಾರಿಯಾಗಿ ಪರಿಹಾರ ಕಂಡುಕೊಳ್ಳಲು ಸಂಘಟನೆಯೇ ಪ್ರಮುಖ ಶಕ್ತಿಯಾಗಿದೆ. ಬೆಳೆಗಾರರು ಪ್ರತಿಯೊಂದು ಹಂತದಲ್ಲೂ ಒಗ್ಗಟ್ಟಾಗಿ ತಮ್ಮ ಹಕ್ಕು ಹಾಗೂ ಸಮಸ್ಯೆಗಳ ಕುರಿತು ಧ್ವನಿ ಎತ್ತಬೇಕು. ಕಸ್ತೂರಿರಂಗನ್ ವರದಿಯ ಕುರಿತು ಸರ್ಕಾರ ಮರುಪರಿಶೀಲನೆ ನಡೆಸುವಂತೆ ಎಲ್ಲರೂ ಒಗ್ಗಟ್ಟಾಗಿ ಒತ್ತಾಯಿಸಬೇಕು. ರೈತರಿಗೆ ದೊರೆಯಬೇಕಾದ ಸೌಲಭ್ಯಗಳು, ಪರಿಹಾರ ಹಾಗೂ ಸರ್ಕಾರದ ಯೋಜನೆಗಳ ಕುರಿತು ನಿರಂತರ ಜಾಗೃತಿ ಮೂಡಿಸುವ ಕಾರ್ಯ ನಡೆಯಬೇಕು ಎಂದು ಹೇಳಿದರು.

ಸ್ವಾತಂತ್ರ್ಯದ ಆಶಯ ಗ್ರಾಮೀಣ ಬದುಕಿನಲ್ಲೂ ಸಾಕಾರವಾಗಬೇಕಾದರೆ ರೈತರು, ಬೆಳೆಗಾರರು ಹಾಗೂ ಗ್ರಾಮೀಣ ಸಮುದಾಯದ ಸಮಸ್ಯೆಗಳಿಗೆ ಪರಿಹಾರ ದೊರೆಯಬೇಕು. ಅದಕ್ಕಾಗಿ ಸಂಘಟನೆ, ಒಗ್ಗಟ್ಟು ಮತ್ತು ಸಾಮಾಜಿಕ ಕಳಕಳಿಯೊಂದಿಗೆ ಮುನ್ನಡೆಯಬೇಕು ಎಂಬ ಸಂದೇಶ ವಳಲಹಳ್ಳಿಯ ಸ್ವಾತಂತ್ರ್ಯೋತ್ಸವದಲ್ಲಿ ಮೂಡಿಬಂತು.

ಕಾರ್ಯಕ್ರಮದಲ್ಲಿ ಸಂಘದ ಪದಾಧಿಕಾರಿಗಳು, ನಿರ್ದೇಶಕರು ಹಾಗೂ ಹೆಚ್ಚಿನ ಸಂಖ್ಯೆಯಲ್ಲಿ ಬೆಳೆಗಾರರು, ಗ್ರಾಮಸ್ಥರು ಉಪಸ್ಥಿತರಿದ್ದು ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

## ಯಶಸ್ವಿಯಾದ 'ಫುಟ್ ಥೆರಪಿ' ಜಾಗೃತಿ ಶಿಬಿರ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಭಾರತೀಯ ಮಹಿಳೆಯರು ಪ್ರಸ್ತುತ ದಿನಗಳಲ್ಲಿ ಅನೇಕ ಆರೋಗ್ಯ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಮಹಿಳೆಯರು ತಮ್ಮ ಆರೋಗ್ಯದ ಕಡೆಗೆ ಹೆಚ್ಚಿನ ಗಮನ ನೀಡಬೇಕು; ದೈಹಿಕವಾಗಿ ಹಾಗೂ ಮಾನಸಿಕವಾಗಿ ಸದೃಢರಾಗಬೇಕು ಎಂದು ವೈದ್ಯೆ ಡಾ. ಸೌಮ್ಯ ಮಣಿ ಕಿವಿಮಾತು ಹೇಳಿದರು.

ಆಗಸ್ಟ್ 14ರಂದು ನಗರದಲ್ಲಿ ಆಯೋಜಿಸಲಾಗಿದ್ದ 'ಫುಟ್ ಥೆರಪಿ' (ಪಾದಗಳ ಚಿಕಿತ್ಸೆ) ಶಿಬಿರದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಮಹಿಳೆಯರಲ್ಲಿ ಯಾವುದೇ ಕಾಯಿಲೆಯ ಲಕ್ಷಣಗಳು ಕಂಡುಬಂದ ತಕ್ಷಣವೇ ನಿರ್ಲಕ್ಷ್ಯ ಮಾಡದೆ, ವೈದ್ಯರನ್ನು ಸಂಪರ್ಕಿಸಿ ಸೂಕ್ತ ಸಲಹೆ, ಮಾರ್ಗದರ್ಶನ ಹಾಗೂ ಚಿಕಿತ್ಸೆ ಪಡೆಯಬೇಕು ಎಂದು ಅವರು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಉಡುಪಿ ಮೂಲದ ಡಾ. ರತ್ನಾಕರ್ ಶೆಟ್ಟಿ ಮಾತನಾಡಿ, "ನಮ್ಮ ದೇಹದಲ್ಲಿ ರಕ್ತಸಂಚಾರ ಸಮರ್ಪಕವಾಗಿ ಆಗಬೇಕು. ದೇಹದಾದ್ಯಂತ ಸಂಪೂರ್ಣವಾಗಿ ರಕ್ತಸಂಚಾರವಾದರೆ ಕೈ, ಕಾಲುಗಳ ನೋವು ಕಾಣಿಸಿಕೊಳ್ಳುವುದಿಲ್ಲ. ಪ್ರತಿಯೊಬ್ಬರೂ ಪ್ರತಿದಿನ ನಡೆದಾಡುವ ಅಭ್ಯಾಸವನ್ನು ಅಳವಡಿಸಿಕೊಳ್ಳಬೇಕು" ಎಂದರು. "ಪರ್ಯಾಯ ಪದ್ಧತಿಯಾದ ಫುಟ್ ಥೆರಪಿಯನ್ನು ತೆಗೆದುಕೊಂಡರೆ ಉತ್ತಮ. 'ಆಕ್ಸಿಪಲ್ಸರ್' ಉಪಕರಣದ ಮೂಲಕ ಥೆರಪಿ ಪಡೆಯುವುದರಿಂದ ದೇಹದಲ್ಲಿ ರಕ್ತಸಂಚಾರ ಯಶಸ್ವಿಯಾಗುತ್ತದೆ. ನರಗಳು ಮೆದುಳಿಗೆ ಸೂಕ್ತ ಮಾಹಿತಿ ರವಾನಿಸುವ ಮೂಲಕ ದೇಹವನ್ನು ಹೆಚ್ಚು ಕಾರ್ಯಪ್ರವೃತ್ತಗೊಳಿಸುತ್ತವೆ" ಎಂದು ಅವರು ವಿವರಿಸಿದರು.

ಹಾಸನ ತಾಲೂಕು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಅಧ್ಯಕ್ಷರಾದ ಕಟ್ಟಾಯ ಶಿವಕುಮಾರ್ ಮಾತನಾಡಿ, "ಹಿಂದಿನ ಕಾಲದಲ್ಲಿ ಇಷ್ಟೊಂದು ಆರೋಗ್ಯ ಸಮಸ್ಯೆಗಳು ಇರಲಿಲ್ಲ. ಆದರೆ, ಇಂದಿನ ಆಧುನಿಕ ಆಹಾರ ಪದ್ಧತಿಯೇ ಅನೇಕ ಕಾಯಿಲೆಗಳಿಗೆ ಕಾರಣವಾಗಿದೆ. ಅತಿಯಾದ ರಾಸಾಯನಿಕ ಮತ್ತು ಔಷಧಿಗಳನ್ನು ಬಳಸಿ ಬೆಳೆದ ಆಹಾರ ಪದಾರ್ಥಗಳನ್ನು ನಾವು ಸೇವಿಸುತ್ತಿದ್ದೇವೆ. ಹೀಗಾಗಿ, ಪ್ರತಿಯೊಬ್ಬರೂ ತಮ್ಮ ಆರೋಗ್ಯದ ಕಡೆಗೆ ಹೆಚ್ಚಿನ ಗಮನ ನೀಡಲೇಬೇಕಾದ ಅನಿವಾರ್ಯತೆ ಇದೆ" ಎಂದು ಕಳವಳ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಮಹಿಳಾ ಘಟಕದ ಅಧ್ಯಕ್ಷರಾದ ಮಮತಾ ಪಾಟೀಲ್, ನಿರ್ದೇಶಕರಾದ ಸುಶೀಲಮ್ಮ, ಮಹಾಸಭಾದ ಮಹಾನಗರ ಘಟಕದ ಅಧ್ಯಕ್ಷ ಹೆಚ್. ಪಿ. ರೋಹಿತ್, ಫುಟ್ ಪಲ್ಸ್ ತರಬೇತಿ ಶಿಬಿರದ ರೋಹಿತ್ ಹಾಗೂ ನವೀನ್, ಮಹಾಸಭಾದ ಮಹಿಳಾ ಘಟಕದ ಪ್ರಧಾನ ಕಾರ್ಯದರ್ಶಿ ಧನಲಕ್ಷ್ಮಿ ಮಯೂರಿ, ನಿರ್ದೇಶಕರಾದ ಭಾಮಿನಿ ಮಂಜುನಾಥ್, ಸವಿತಾ ಭೂಷಣ್, ವೀಣಾ ದೇವರಾಜ್, ಭವ್ಯ ಎಸ್.ಬಿ. ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

ಈ 'ಫುಟ್ ಪಲ್ಸ್' ಶಿಬಿರದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಮಹಿಳೆಯರು ಹಾಗೂ ಸಾರ್ವಜನಿಕರು ಭಾಗವಹಿಸಿ, ಕಾರ್ಯಕ್ರಮದ ಸದುಪಯೋಗ ಪಡೆದುಕೊಂಡರು.

## ಸಮಾಜದ ಬದಲಾವಣೆಯಲ್ಲಿ ವಿದ್ಯಾರ್ಥಿಗಳು ಸಕ್ರಿಯವಾಗಿ ಭಾಗವಹಿಸಲಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ವಿದ್ಯಾರ್ಥಿಗಳು ಕೇವಲ ಅಂಕಗಳು, ಉದ್ಯೋಗ ಹಾಗೂ ವೈಯಕ್ತಿಕ ಯಶಸ್ಸಿನ ಬೆನ್ನೇರದೆ, ಸಮಾಜದ ಬದಲಾವಣೆಯಲ್ಲಿ ಸಕ್ರಿಯವಾಗಿ ಭಾಗವಹಿಸುವ ಮೂಲಕ ಅನ್ಯಾಯದ ವಿರುದ್ಧ ಧ್ವನಿ ಎತ್ತಬೇಕು ಎಂದು ಎಐಡಿಎಸ್ಓ (ಂಆSಔ) ರಾಜ್ಯ ಉಪಾಧ್ಯಕ್ಷೆ ಚಂದ್ರಕಲಾ ಕರೆ ನೀಡಿದರು.




ನಗರದ ನೀಲಕಂಠೇಶ್ವರ ಗುರುವಿನ ಶೆಟ್ಟಿ ಸಭಾಂಗಣದಲ್ಲಿ ಆಲ್ ಇಂಡಿಯಾ ಡೆಮಾಕ್ರಟಿಕ್ ಸ್ಟೂಡೆಂಟ್ಸ್ ಆರ್ಗನೈಸೇಷನ್ ಹಾಸನ ಜಿಲ್ಲಾ ಕೌನ್ಸಿಲ್ ವತಿಯಿಂದ ಆಯೋಜಿಸಲಾಗಿದ್ದ ಎರಡು ದಿನಗಳ ಜಿಲ್ಲಾಮಟ್ಟದ ವಿದ್ಯಾರ್ಥಿ ಶಿಬಿರದ ಸಮಾರೋಪದಲ್ಲಿ 'ಸಮಾಜದ ಬದಲಾವಣೆಯಲ್ಲಿ ವಿದ್ಯಾರ್ಥಿಗಳ ಪಾತ್ರ' ಎಂಬ ವಿಷಯದ ಕುರಿತು ಅವರು ಮಾತನಾಡಿದರು.

"ದೇಶವು 80ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಆಚರಿಸುತ್ತಿದ್ದರೂ, ಇಂದಿಗೂ ಕೋಟ್ಯಂತರ ಜನರು ಹಸಿವಿನಿಂದ ಬಳಲುತ್ತಿದ್ದಾರೆ. ಕೊರೊನಾ ಕಾಲದಲ್ಲಿ ಸಾಮಾನ್ಯ ಜನರು ತತ್ತರಿಸುತ್ತಿದ್ದಾಗ ಕೆಲವೇ ಮಂದಿ ಕೋಟ್ಯಾಧಿಪತಿಗಳಾದರು. ಇದು ನಮ್ಮ ಸಮಾಜದಲ್ಲಿರುವ ತೀವ್ರ ಆರ್ಥಿಕ ಅಸಮಾನತೆಯ ವಾಸ್ತವ. ಇಂದಿಗೂ ಗ್ರಾಮೀಣ ಭಾಗದ ಮಕ್ಕಳು ಉಕ್ಕಿ ಹರಿಯುವ ನದಿ ದಾಟಿ ಶಾಲೆಗೆ ಹೋಗುವಂತಹ ಶೋಚನೀಯ ಪರಿಸ್ಥಿತಿ ಇದೆ. ಶಾಲೆಗಳಿಗೆ ಮೂಲಸೌಕರ್ಯ ಒದಗಿಸುವಂತೆ ವಿದ್ಯಾರ್ಥಿಗಳೇ ಬೀದಿಗಿಳಿದು ಹೋರಾಡಬೇಕಾದ ಅನಿವಾರ್ಯತೆ ಇದೆ. ಇಂತಹ ಸಂದರ್ಭದಲ್ಲಿ ವಿದ್ಯಾರ್ಥಿ ಸಂಘಟನೆಗಳ ಪಾತ್ರ ಅತ್ಯಂತ ಮಹತ್ವದ್ದಾಗಿದೆ" ಎಂದು ಅವರು ಆತಂಕ ವ್ಯಕ್ತಪಡಿಸಿದರು.

ಭಗತ್ ಸಿಂಗ್ ಅವರ ಆದರ್ಶಗಳನ್ನು ಮೈಗೂಡಿಸಿಕೊಂಡು ವಿದ್ಯಾರ್ಥಿಗಳು ತಮ್ಮ ಹಕ್ಕುಗಳಿಗಾಗಿ ಸಂಘಟಿತರಾಗಬೇಕು ಹಾಗೂ ಎಐಡಿಎಸ್ಓ ಹಮ್ಮಿಕೊಂಡಿರುವ "ಸಾರ್ವಜನಿಕ ಶಿಕ್ಷಣ ಉಳಿಸಿ ಆಂದೋಲನ"ದಲ್ಲಿ ಸಕ್ರಿಯವಾಗಿ ಕೈಜೋಡಿಸಬೇಕು ಎಂದು ಅವರು ಮನವಿ ಮಾಡಿದರು.

ಶಿಬಿರದ ಮೊದಲ ದಿನದಂದು 'ವಿದ್ಯಾರ್ಥಿಗಳಿಗೆ ಯಾರು ಆದರ್ಶವಾಗಬೇಕು?' ಎಂಬ ವಿಷಯದ ಕುರಿತು ಮಾತನಾಡಿದ ಎಐಡಿಎಸ್ಓ ರಾಜ್ಯ ಖಜಾಂಚಿ ಸುಭಾಷ್ ಬೆಟ್ಟದಕೊಪ್ಪ, "ಭಗತ್ ಸಿಂಗ್, ನೇತಾಜಿ ಸುಭಾಷ್ ಚಂದ್ರ ಬೋಸ್ ಅವರಂತಹ ಕ್ರಾಂತಿಕಾರಿಗಳು ಕಂಡ ಉಚಿತ ಶಿಕ್ಷಣ, ಆರೋಗ್ಯ, ಹಾಗೂ ನಿರುದ್ಯೋಗ-ಭ್ರಷ್ಟಾಚಾರ ಮುಕ್ತ ಸಮಾಜದ ಕನಸುಗಳು ನನಸಾಗಿವೆಯೇ ಎಂಬುದನ್ನು ವಿದ್ಯಾರ್ಥಿಗಳು ಪ್ರಶ್ನಿಸಬೇಕು" ಎಂದರು.

ವಿದ್ಯಾರ್ಥಿಗಳು ಮೊಬೈಲ್ ಹಾಗೂ ಸಾಮಾಜಿಕ ಜಾಲತಾಣಗಳ ಅತಿಯಾದ ಬಳಕೆಯಿಂದ ದೂರವಿದ್ದು, ವೈಜ್ಞಾನಿಕ ಮನೋಭಾವ, ಸಾಮಾಜಿಕ ಜವಾಬ್ದಾರಿ ಹಾಗೂ ಪ್ರಶ್ನಿಸುವ ಗುಣವನ್ನು ಬೆಳೆಸಿಕೊಳ್ಳಬೇಕು ಎಂದು ಅವರು ಕಿವಿಮಾತು ಹೇಳಿದರು.

ಎರಡು ದಿನಗಳ ಶಿಬಿರದಲ್ಲಿ ವಿದ್ಯಾರ್ಥಿಗಳಿಗಾಗಿ ಗುಂಪು ಚರ್ಚೆ, ಸಾಂಸ್ಕೃತಿಕ ಕಾರ್ಯಕ್ರಮಗಳು, ಕ್ರೀಡಾ ಸ್ಪರ್ಧೆಗಳು ಹಾಗೂ ಜನಪರ ಸಿನಿಮಾ ಪ್ರದರ್ಶನ ಏರ್ಪಡಿಸಲಾಗಿತ್ತು.

ಜಿಲ್ಲೆಯ ವಿವಿಧ ಪ್ರೌಢಶಾಲೆ ಮತ್ತು ಕಾಲೇಜುಗಳ ನೂರಾರು ವಿದ್ಯಾರ್ಥಿಗಳು ಉತ್ಸಾಹದಿಂದ ಪಾಲ್ಗೊಂಡಿದ್ದರು.

ಶಿಬಿರದಲ್ಲಿ ಅಖಿಲ ಭಾರತ ಶಿಕ್ಷಣ ಉಳಿಸಿ ಸಮಿತಿಯ (ಂಈSಇಅ) ರಾಜ್ಯ ಉಪಾಧ್ಯಕ್ಷ ವಿ.ಎನ್. ರಾಜಶೇಖರ್, ಎಐಡಿಎಸ್ಓ ಜಿಲ್ಲಾ ಅಧ್ಯಕ್ಷೆ ಚೈತ್ರ, ಜಿಲ್ಲಾ ಕಾರ್ಯದರ್ಶಿ ಸುಷ್ಮಾ, ಜಿಲ್ಲಾ ಉಪಾಧ್ಯಕ್ಷ ಅಭಿಷೇಕ್ ಹಾಗೂ ಪದಾಧಿಕಾರಿಗಳಾದ ಮಮತಾ, ಪುರುಷೋತ್ತಮ್, ತಿಲಕ್, ಮತ್ತು ಧನು ಸೇರಿದಂತೆ ಪ್ರಮುಖರು ಉಪಸ್ಥಿತರಿದ್ದರು.

## ದೇವಸ್ಥಾನದ ಹೊರಗೆ ಚಪ್ಪಲಿ ರಾಶಿಯಲ್ಲಿ ತನ್ನ ಚಪ್ಪಲಿ ಹುಡುಕಲು ChatGPT ಬಳಸಿದ!

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಉಜ್ಜಯಿನಿ: ದೇವಸ್ಥಾನಕ್ಕೆ ಹೋದಾಗ ಚಪ್ಪಲಿ ಕಳೆದುಹೋದರೆ, ನೂರಾರು ಚಪ್ಪಲಿಗಳ ನಡುವೆ ತಮ್ಮ ಚಪ್ಪಲಿಯನ್ನು ಹುಡುಕುವುದು ದೊಡ್ಡ ಸವಾಲು. ಆದರೆ, ಗೋವಾ ಮೂಲದ ವ್ಯಕ್ತಿಯೊಬ್ಬರು ಈ ಸಮಸ್ಯೆಗೆ ತಂತ್ರಜ್ಞಾನದ ಮೊರೆ ಹೋಗಿದ್ದಾರೆ.

ಉಜ್ಜಯಿನಿಯ ಪ್ರಸಿದ್ಧ ಮಹಾಕಾಳ ದೇವಸ್ಥಾನಕ್ಕೆ ಭೇಟಿ ನೀಡಿದ್ದ ವೇಳೆ ವ್ಯಕ್ತಿಯ ಚಪ್ಪಲಿ ಕಳೆದುಹೋಗಿತ್ತು. ದೇವಸ್ಥಾನದ ಹೊರಭಾಗದಲ್ಲಿ ಭಕ್ತರು ಬಿಟ್ಟಿದ್ದ ನೂರಾರು ಚಪ್ಪಲಿಗಳ ರಾಶಿಯಲ್ಲಿ ತಮ್ಮ ಚಪ್ಪಲಿಯನ್ನು ಹುಡುಕಬೇಕಾದ ಪರಿಸ್ಥಿತಿ ಎದುರಾಯಿತು. ಈ ವೇಳೆ ಅವರು ತಮ್ಮ ಚಪ್ಪಲಿಯ ಫೋಟೋವನ್ನು ತೆಗೆದುಕೊಂಡು, ದೇವಸ್ಥಾನದ ಹೊರಭಾಗದಲ್ಲಿ ರಾಶಿಯಾಗಿ ಬಿದ್ದಿದ್ದ ಚಪ್ಪಲಿಗಳ ಫೋಟೋಗಳನ್ನೂ ಸಂಗ್ರಹಿಸಿ ChatGPTಗೆ ಅಪ್‌ಲೋಡ್ ಮಾಡಿದ್ದಾರೆ.

ನಂತರ, "ಈ ಚಪ್ಪಲಿಗಳಲ್ಲಿ ನನ್ನ ಚಪ್ಪಲಿಯನ್ನು ಗುರುತಿಸಬಹುದೇ?" ಎಂದು ChatGPTಗೆ ಕೇಳಿದ್ದಾರೆ. ಚಪ್ಪಲಿಯ ವಿನ್ಯಾಸ, ಬಣ್ಣ ಹಾಗೂ ಆಕಾರವನ್ನು ಹೋಲಿಕೆ ಮಾಡುವ ಮೂಲಕ ಸೂಕ್ತ ಜೋಡಿಯನ್ನು ಗುರುತಿಸಲು AI ನೆರವು ಪಡೆದಿದ್ದಾರೆ.

ನೂರಾರು ಚಪ್ಪಲಿಗಳ ನಡುವೆ ಕಳೆದುಹೋದ ತಮ್ಮ ಚಪ್ಪಲಿಯನ್ನು ಪತ್ತೆಹಚ್ಚಲು ಕೃತಕ ಬುದ್ಧಿಮತ್ತೆಯನ್ನು ಬಳಸಿದ ಈ ಘಟನೆ ಇದೀಗ ಸಾಮಾಜಿಕ ಜಾಲತಾಣಗಳಲ್ಲಿ ಗಮನ ಸೆಳೆಯುತ್ತಿದೆ. ಸಾಮಾನ್ಯವಾಗಿ ಮಾಹಿತಿ ಹುಡುಕಾಟ, ಬರವಣಿಗೆ ಹಾಗೂ ಚಿತ್ರ ವಿಶ್ಲೇಷಣೆಗೆ ಬಳಸಲಾಗುತ್ತಿರುವ ChatGPT, ಇದೀಗ ಇಂತಹ ದೈನಂದಿನ ಸಣ್ಣ ಸಮಸ್ಯೆಗಳಿಗೂ ಜನರ ನೆರವಿಗೆ ಬರುತ್ತಿರುವುದು ಕುತೂಹಲ ಮೂಡಿಸಿದೆ.

## ಥಾರ್ ಕಾರು ಡಿಕ್ಕಿ: ಪಾದಚಾರಿ ಸಾವು

ಚನ್ನರಾಯಪಟ್ಟಣ: ರಸ್ತೆ ಬದಿಯಲ್ಲಿ ನಡೆದುಕೊಂಡು ಹೋಗುತ್ತಿದ್ದ ವ್ಯಕ್ತಿಗೆ ಥಾರ್ ಕಾರು ಹಿಂಬದಿಯಿಂದ ಡಿಕ್ಕಿ ಹೊಡೆದ ಪರಿಣಾಮ ಪಾದಚಾರಿ ಮೃತಪಟ್ಟಿರುವ ಘಟನೆ ತಾಲ್ಲೂಕಿನ ಬಂಡಿಹಳ್ಳಿ ಗೇಟ್ ಬಳಿ ನಡೆದಿದೆ. ಬಂಡಿಹಳ್ಳಿ ಗ್ರಾಮದ ಚಂದ್ರ (39) ಮೃತಪಟ್ಟವರು.

ಆ.15ರಂದು ರಾತ್ರಿ ಚಂದ್ರ ಅವರು ಬಂಡಿಹಳ್ಳಿ ಗೇಟ್ ಬಳಿ ರಸ್ತೆಯ ಎಡಬದಿಯಲ್ಲಿ ನಡೆದುಕೊಂಡು ಮನೆಗೆ ತೆರಳುತ್ತಿದ್ದರು. ಈ ವೇಳೆ ಬೆಂಗಳೂರು ಕಡೆಯಿಂದ ಬಂದ ಕಾರು ಚಾಲಕ ಅತಿವೇಗದಿಂದ ಬಂದು ಹಿಂಬದಿಯಿಂದ ಡಿಕ್ಕಿ ಹೊಡೆದಿದ್ದಾನೆ. ಡಿಕ್ಕಿಯ ರಭಸಕ್ಕೆ ರಸ್ತೆಗೆ ಬಿದ್ದ ಚಂದ್ರ ಅವರ ತಲೆ, ಕೈ, ಕಾಲು ಸೇರಿ ದೇಹದ ವಿವಿಧ ಭಾಗಗಳಿಗೆ ಗಂಭೀರ ಗಾಯಗಳಾಗಿದ್ದು, ಸ್ಥಳದಲ್ಲೇ ಮೃತಪಟ್ಟಿದ್ದಾರೆ.

## 'ಜೆನ್-ಜಿ' ಕಾಲಘಟ್ಟದಲ್ಲಿ ಹಿರಿಯರ ಮಾರ್ಗದರ್ಶನ ಅತ್ಯಗತ್ಯ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: "ಹಂಚಿದಷ್ಟೂ ಹೆಚ್ಚುವುದು ಜ್ಞಾನ ಮಾತ್ರ. ಇಂದಿನ 'ಜೆನ್-ಜಿ' ಕಾಲಘಟ್ಟದಲ್ಲಿ ಮಾಹಿತಿ ಸುಲಭವಾಗಿ ಸಿಗುತ್ತಿದೆ, ಆದರೆ ಸನ್ಮಾರ್ಗದಲ್ಲಿ ಸಾಗಲು ಅಗತ್ಯವಾದ ಮಾರ್ಗದರ್ಶನ ಸಿಗುವುದು ವಿರಳವಾಗಿದೆ. ಅಂತಹ ಮೌಲ್ಯಯುತ ಮಾರ್ಗದರ್ಶನ ಕೇವಲ ಹಿರಿಯರ ಮತ್ತು ಜ್ಞಾನಿಗಳ ಸಾನ್ನಿಧ್ಯದಿಂದ ಮಾತ್ರ ಸಾಧ್ಯ" ಎಂದು ಡಯಟ್ ಉಪನ್ಯಾಸಕ ಸಿ.ಕೆ. ಹರೀಶ್ ಅಭಿಪ್ರಾಯಪಟ್ಟರು.



ನಗರದ ವಿವೇಕಾನಂದ ಯೋಗ ಶಿಕ್ಷಣ ಶಾಲೆಯಲ್ಲಿ ಶ್ರಾವಣ ಮಾಸದ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ, ಗಾಯಕ ಹಾಗೂ ಶಿಕ್ಷಕ ದಿವಾಕರ್ ಅವರ 'ಕಾವ್ಯಶ್ರಾವ್ಯ' ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಅವರು ಮಾತನಾಡಿದರು.

ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದ ಹಿರಿಯ ಲೇಖಕ ಗೊರೂರು ಶಿವೇಶ್, "ನಿಸರ್ಗದಲ್ಲಿ ಆಧ್ಯಾತ್ಮದ ಹುಡುಕಾಟ ಹಾಗೂ ಪ್ರಕೃತಿಯ ಆರಾಧನೆಯೇ ಕನ್ನಡ ನವೋದಯ ಸಾಹಿತ್ಯದ ಜೀವಾಳ. ನವೋದಯ ಕವಿಗಳು ಪ್ರಕೃತಿಯಲ್ಲಿ ಅಡಗಿರುವ ನಿಗೂಢತೆ, ಸೌಂದರ್ಯ ಮತ್ತು ರಹಸ್ಯಗಳನ್ನು ವರ್ಣಿಸುತ್ತಲೇ ತಾವು ಕಂಡುಕೊಂಡ ಸತ್ಯವನ್ನು ಕಾವ್ಯಗಳ ಮೂಲಕ ಸಮಾಜಕ್ಕೆ ಧಾರೆ ಎರೆದಿದ್ದಾರೆ. ಸೂರ್ಯೋದಯ, ಸೂರ್ಯಾಸ್ತ, ನದಿ, ಕಣಿವೆ, ಹಕ್ಕಿಗಳ ಇಂಚರ ಹಾಗೂ ಹೂವರಳುವ ಪ್ರಕ್ರಿಯೆಗಳಲ್ಲಿ ಮಾನವ ಗ್ರಹಿಸಬೇಕಾದ ಜೀವಪರ ಸಂದೇಶವಿದೆ. ಶ್ರಾವಣ ಮಾಸದಲ್ಲಿ ಇಂತಹ ಸುಮಧುರ ಸಾಹಿತ್ಯ ಮತ್ತು ಸಂಗೀತದ ಶ್ರವಣವು ಮನುಷ್ಯನ ಮನಸ್ಸನ್ನು ಸಂಸ್ಕಾರಗೊಳಿಸಿ, ಸೌಮ್ಯ ಹಾಗೂ ಮೃದುಗೊಳಿಸುತ್ತದೆ" ಎಂದು ತಿಳಿಸಿದರು.

'ಕಾವ್ಯಶ್ರಾವ್ಯ' ಕಾರ್ಯಕ್ರಮದ ಕೇಂದ್ರಬಿಂದುವಾಗಿದ್ದ ಗಾಯಕ ಹಾಗೂ ಅಧ್ಯಾಪಕ ದಿವಾಕರ್ ಅವರು ರಾಷ್ಟ್ರಕವಿ ಕುವೆಂಪು, ದ.ರಾ. ಬೇಂದ್ರೆ, ಕೆ.ಎಸ್. ನರಸಿಂಹಸ್ವಾಮಿ, ಎಚ್.ಎಸ್. ವೆಂಕಟೇಶಮೂರ್ತಿ ಹಾಗೂ ಸುಬ್ರಾಯ ಚೊಕ್ಕಾಡಿ ಅವರ ಆಯ್ದ ಭಾವಗೀತೆಗಳನ್ನು ಸುಶ್ರಾವ್ಯವಾಗಿ ಹಾಡಿ ಪ್ರೇಕ್ಷಕರನ್ನು ರಂಜಿಸಿದರು. ಇದೇ ಸಂದರ್ಭದಲ್ಲಿ ಯೋಗ ಶಾಲೆಯ ವತಿಯಿಂದ ಗಾಯಕ ದಿವಾಕರ್ ಅವರನ್ನು ಆತ್ಮೀಯವಾಗಿ ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಯೋಗ ಶಾಲೆಯ ಹಿರಿಯ ಗುರುಗಳಾದ ಧರ್ಮಪ್ಪ, ಪುಟ್ಟಪ್ಪ, ಹಿರಿಯ ಶಿಕ್ಷಣಾರ್ಥಿಗಳಾದ ಶಿಕ್ಷಣ ಇಲಾಖೆಯ ಚೆಲುವೇಗೌಡ, ಆನಂದ್, ಅಣ್ಣಪ್ಪ ಶೆಟ್ಟಿ, ವಿಶ್ವನಾಥ್ ಉದ್ಯಮಿಗಳಾದ ಚಂದ್ರು, ರಾಜೇಶ್, ಪರಮೇಶ್, ಹರ್ಷ ಹಾಗೂ ಪ್ರಮುಖರಾದ ಸುಮನಾ, ಮೋಹನ ಕುಮಾರಿ, ಪದ್ಮಾ, ರುಕ್ಮಿಣಿ, ಜ್ಯೋತಿ, ಜಯಂತಿ, ಪಂಕಜ, ಪದ್ಮ ಸೇರಿದಂತೆ ಹಲವು ಶಿಕ್ಷಣಾರ್ಥಿಗಳು ಹಾಗೂ ಆಧ್ಯಾತ್ಮಾಸಕ್ತರು ಉಪಸ್ಥಿತರಿದ್ದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248